# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1418 (1559) |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 19 /12/2025 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಹಲವಾರು ನೈಜ ಕಾರ್ಮಿಕರ ಮಕ್ಕಳು ಅರ್ಜಿ ಸಲ್ಲಿಸಿದ್ದರೂ 2022-23ನೇ ಸಾಲಿನಿಂದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ವಿದ್ಯಾರ್ಥಿ ವೇತನ ದೊರಕದೆ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="2">ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಮಂಡಳಿಯ ನಿಯಮಗಳನ್ವಯ ಶೈಕ್ಷಣಿಕ ಧನಸಹಾಯವನ್ನು ನೀಡಲಾಗುತ್ತಿದೆ. 2022-23 ರಿಂದ ಇಲ್ಲಿಯವರೆಗೆ ನೀಡಲಾಗಿರುವ ಶೈಕ್ಷಣಿಕ ಧನಸಹಾಯವು ಈ ಕೆಳಕಂಡಂತೆ ಇರುತ್ತದೆ.<br><br>
<table>
<tr><th>ವರ್ಷ</th><th>ಅರ್ಜಿ ಸಲ್ಲಿಸಿದ ಫಲಾನುಭವಿಗಳ ಸಂಖ್ಯೆ</th><th>ಸೌಲಭ್ಯ ಪಡೆದ ಫಲಾನುಭವಿಗಳ ಸಂಖ್ಯೆ</th></tr>
<tr><td>2022-23</td><td>11,13,933</td><td>888952</td></tr>
<tr><td>2023-24</td><td>2,84,153</td><td>1,91,577</td></tr>
<tr><td>2024-25</td><td>2,23,014</td><td>1,86,811</td></tr>
</table>
<br>ಶೈಕ್ಷಣಿಕ ಧನಸಹಾಯವನ್ನು ನೀಡುವ ಪೂರ್ವದಲ್ಲಿ ಅವಶ್ಯಕ ಪರಿಶೀಲನೆಯನ್ನು ನಡೆಸಲಾಗುತ್ತಿದ್ದು, ಅನರ್ಹ ಕಾರ್ಮಿಕರು ಅರ್ಜಿ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕೃತಗೊಳಿಸಲಾಗುತ್ತಿದೆ. ಇದಲ್ಲದೇ, ಮಂಡಳಿಯ ಶೈಕ್ಷಣಿಕ ಧನಸಹಾಯವನ್ನು ನೇರ ವರ್ಗಾವಣೆಯ ಮೂಲಕ ನೀಡಲಾಗುತ್ತಿದ್ದು, ಫಲಾನುಭವಿಗಳು ತಮ್ಮ ಬ್ಯಾಂಕ್ ಖಾತೆಯನ್ನು ಆಧಾರ್ ಸಂಖ್ಯೆಯೊಂದಿಗೆ ಜೋಡಣೆ ಮಾಡದಿದ್ದಲ್ಲಿ ಅವರಿಗೆ ಶೈಕ್ಷಣಿಕ ಧನಸಹಾಯವನ್ನು ನೀಡಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ಆಧಾರ್ ಸಂಖ್ಯೆಯನ್ನು ಬ್ಯಾಂಕ್ ಖಾತೆಯೊಂದಿಗೆ ಜೋಡಣೆ ಮಾಡಲು ಮಂಡಳಿಯ ವೆಬ್‌ಸೈಟ್‌ನಲ್ಲಿ ಪ್ರಕಟಣೆಯನ್ನು ನೀಡಲಾಗಿರುತ್ತದೆ. ಫಲಾನುಭವಿಗಳು ತಮ್ಮ ಆಧಾರ್ ಸಂಖ್ಯೆಯನ್ನು ಬ್ಯಾಂಕ್ ಖಾತೆಯೊಂದಿಗೆ ಜೋಡಣೆ ಮಾಡಿದ ನಂತರ ಶೈಕ್ಷಣಿಕ ಧನಸಹಾಯವನ್ನು ಅವರ ಖಾತೆಗೆ ವರ್ಗಾವಣೆ ಮಾಡಲು ಕ್ರಮಕೈಗೊಳ್ಳಲಾಗುತ್ತದೆ.</td></tr>
<tr><td>ಆ)</td><td>ಬಂದಿದ್ದಲ್ಲಿ 2022-23ನೇ ಸಾಲಿನಿಂದ 2024-25ನೇ ಸಾಲಿನ ವರೆಗೆ ಪ್ರತಿ ವರ್ಷ ವಿದ್ಯಾರ್ಥಿ ವೇತನ ಕೋರಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಗೆ ಅರ್ಜಿ ಸಲ್ಲಿಸಿರುವ ಮತ್ತು ವಿದ್ಯಾರ್ಥಿ ವೇತನ ದೊರಕಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;</td></tr>
</table>

| | | |
|---|---|---|
| ಇ) | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಹಲವಾರು ವಿದ್ಯಾರ್ಥಿಗಳಿಗೆ ಕಾರ್ಮಿಕರ ಮಕ್ಕಳ ಉನ್ನತ ಶಿಕ್ಷಣ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಇನ್ನೂ ನೋಂದಣಿ ಸಂಖ್ಯೆ ಬರದೆ ಇರುವ ಕಾರಣಕ್ಕೆ ಅರ್ಜಿ ಸಲ್ಲಿಸಲು ಸಾಧ್ಯವಾಗದಿರುವುದರಿಂದ ಈ ಸಮಸ್ಯೆ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಉನ್ನತ ಶಿಕ್ಷಣದ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಅನುಕೂಲವಾಗುವಂತೆ ಕಾಲಮಿತಿಯನ್ನು ವಿಸ್ತರಿಸಲಾಗಿರುತ್ತದೆ. |
| ಈ) | ಪ್ರತೀ ವರ್ಷ ಕಾರ್ಮಿಕರ ಮಕ್ಕಳಿಗೆ ಎಸ್.ಎಸ್.ಪಿ ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಲು ವಿವಿಧ ರೀತಿಯ ಸಮಸ್ಯೆಗಳು ಸತತವಾಗಿ ಎದುರಾಗುತ್ತಿದ್ದು, ಇದರ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಕಳೆದ 03 ವರ್ಷಗಳಿಂದ ಮಂಡಳಿಯ ಶೈಕ್ಷಣಿಕ ಧನಸಹಾಯವನ್ನು ಇ-ಗವರ್ನೆನ್ಸ್ ಇಲಾಖೆಯ ಎಸ್.ಎಸ್.ಪಿ. ತಂತ್ರಾಂಶದ ಮೂಲಕ ನೀಡಲಾಗುತ್ತಿದ್ದು, ಫಲಾನುಭವಿಗಳು ತಂತ್ರಾಂಶದಲ್ಲಿ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಮಂಡಳಿಯ ಗಮನಕ್ಕೆ ತಂದಾಗ ಇ-ಗವರ್ನೆನ್ಸ್ ಇಲಾಖೆಗೆ ಮಾಹಿತಿಯನ್ನು ನೀಡಿ ಸಮಸ್ಯೆಯನ್ನು ಪರಿಹರಿಸಲು ಕ್ರಮಕೈಗೊಳ್ಳಲಾಗುತ್ತಿದೆ. |

**ಕಾಇ 509 ಎಲ್‌ಇಟಿ 2025**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**